ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

(14)

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 7/3/21

# ಆರು ಸಚಿವರ ಅರ್ಜಿ: ಸುದ್ದಿ ಪ್ರಕಟಣೆಗೆ ತಡೆಯಾಜ್ಞೆ

ಪ್ರಜಾವಾಣಿ ವಾರ್ತೆ 7-3-21

ಬೆಂಗಳೂರು: ಆರು ಸಚಿವರ ವಿರುದ್ಧ ಯಾವುದೇ ರೀತಿಯಲ್ಲಿ ಮಾನಹಾನಿಕರ ಸುದ್ದಿಗಳನ್ನು ಪ್ರಕಟಿಸದಂತೆ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯ ಶನಿವಾರ ತಾತ್ಕಾಲಿಕ ತಡೆಯಾಜ್ಞೆ ನೀಡಿದೆ.

ಕ್ರೀಡೆ ಮತ್ತು ಯುವಜನ ಸಬಲೀಕರಣ ಸಚಿವ ಕೆ.ಸಿ. ನಾರಾಯಣಗೌಡ, ನಗರಾಭಿವೃದ್ಧಿ ಸಚಿವ ಬೈರತಿ ಬಸವರಾಜ್, ಕಾರ್ಮಿಕ ಸಚಿವ ಶಿವರಾಮ ಹೆಬ್ಬಾರ್, ಆರೋಗ್ಯ ಸಚಿವ ಡಾ.ಕೆ. ಸುಧಾಕರ್, ಕೃಷಿ ಸಚಿವ ಬಿ.ಸಿ. ಪಾಟೀಲ ಮತ್ತು ಸಹಕಾರ ಸಚಿವ ಎಸ್.ಟಿ. ಸೋಮಶೇಖರ್ ಅವರು ಶುಕ್ರವಾರ ಅರ್ಜಿ ಸಲ್ಲಿಸಿದ್ದರು. 67 ಸುದ್ದಿ ಸಂಸ್ಥೆಗಳು ಮತ್ತು ಸಾಮಾಜಿಕ ಕಾರ್ಯಕರ್ತ ರಾಜಶೇಖರ ಮುಲಾಲಿ ಅವರನ್ನು ಪ್ರತಿವಾದಿಯನ್ನಾಗಿ ಮಾಡಿದ್ದರು.

ಅದೇ ವೇಳೆ ಮಧ್ಯಂತರ ಅರ್ಜಿಯನ್ನೂ (ಐ.ಎ) ಸಲ್ಲಿಸಿ ತಡೆಯಾಜ್ಞೆ ಕೋರಿದ್ದರು. ಹೀಗಾಗಿ, ಈ ಅರ್ಜಿಯ ವಿಚಾರಣೆಯನ್ನು ನ್ಯಾಯಾಲಯ ಶನಿವಾರ ನಡೆಸಿತು. ಇದೇ ವೇಳೆ ಸುದ್ದಿ ವಾಹಿನಿಯೊಂದು ಶನಿವಾರ ಕೇವಿಯಟ್ ಸಲ್ಲಿಸಿ ವಿಚಾರಣೆ ನಡೆಸದೇ ತಡೆಯಾಜ್ಞೆ ನೀಡಬಾರದು ಎಂದು ಕೋರಿತ್ತು. ಅದನ್ನು ಪರಿಗಣಿಸದ ನ್ಯಾಯಾಲಯ, ತಾತ್ಕಾಲಿಕ ತಡೆಯಾಜ್ಞೆ ನೀಡಿದೆ.

ಮಾರ್ಚ್ 31ಕ್ಕೆ ವಿಚಾರಣೆಯನ್ನು ಮುಂದೂಡಲಾಗಿದ್ದು, ಅಲ್ಲಿಯವರೆಗೆ ತಡೆಯಾಜ್ಞೆ ಅಸ್ತಿತ್ವದಲ್ಲಿರುತ್ತದೆ.